# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 241 (243)

ಸದಸ್ಯರ ಹೆಸರು : ಶ್ರೀ ಶಿವಕುಮಾರ್ ಕೆ. (ನಾಮ ನಿರ್ದೇಶಿತರು)

ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು

ಉತ್ತರಿಸಬೇಕಾದ ದಿನಾಂಕ : 09-12-2025

| ಕ್ರ. ಸಂ. | ವಿಷಯ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಎಷ್ಟು ಹೆಕ್ಟೇರ್ ಗಳಲ್ಲಿ ಬಾಳೆ ಬೆಳೆಗಳನ್ನು ಬೆಳೆಯಲಾಗುತ್ತಿದೆ; ಯಾವ ಯಾವ ತಳಿಗಳನ್ನು ಬೆಳೆಯಲಾಗುತ್ತಿದೆ: | ರಾಜ್ಯದಲ್ಲಿ ಒಟ್ಟಾರೆ 48,853 ಹೆಕ್ಟೇರ್ ಪ್ರದೇಶದಲ್ಲಿ ಬಾಳೆ ಬೆಳೆಯನ್ನು ಬೆಳೆಯಲಾಗುತ್ತಿದೆ.<br>ಗ್ರಾಂಡ್ ನೈನ್ (ಜಿ9), ನೇಂದ್ರನ್, ಏಲಕ್ಕಿಬಾಳೆ, ನಂಜನಗೂಡು ರಸಬಾಳೆ, ಕಮಲಾಪುರ ಕೆಂಪು ಬಾಳೆ ಮತ್ತು ಇತರೆ ತಳಿಗಳನ್ನು ಬೆಳೆಯಲಾಗುತ್ತಿದೆ. |
| (ಆ) | ನಂಜನಗೂಡು ರಸಬಾಳೆ ತಳಿಯನ್ನು ಎಷ್ಟು ಹೆಕ್ಟೇರ್ ಪ್ರದೇಶಗಳಲ್ಲಿ ಮತ್ತು ಯಾವ ಯಾವ ಭಾಗಗಳಲ್ಲಿ ಬೆಳೆಯಲಾಗುತ್ತಿದೆ; ಈ ತಳಿಯನ್ನು ಹೆಚ್ಚಿನದಾಗಿ ಬೆಳೆಯಲು ಸರ್ಕಾರದಿಂದ ಉತ್ತೇಜನ ನೀಡುವ ಯೋಜನೆಗಳಾವುವು? (ಮಾಹಿತಿ ನೀಡುವುದು). | ನಂಜನಗೂಡು ರಸಬಾಳೆ ತಳಿಯನ್ನು 85.30 ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ.<br><br>ಈ ತಳಿಯನ್ನು ನಂಜನಗೂಡು ತಾಲ್ಲೂಕಿನ ಹನುಮನಪುರ, ಸಿಂಧುವಳ್ಳಿ, ಮಾಡ್ರಹಳ್ಳಿ, ಹೆಮ್ಮರಗಾಲ, ಹಂಪಾಪುರ, ವೀರದೇವರಪುರ, ತಾಂಡವಪುರ, ಹಗಿನವಾಳು, ಹಳೇಪುರ, ಅಂಬಳೆ, ಕೂಗಲೂರು, ಕುರಹಟ್ಟಿ, ದೇವಿರಮ್ಮನಹಳ್ಳಿ, ಸಿದ್ದಯ್ಯನಹುಂಡಿ, ಹೆಡತಲೆ, ಹಳೇಪುರ, ಚಿನ್ನಂಬಳ್ಳಿ, ಅಂಬಳೆ, ಕಾರ್ಯ, ಕಾರಾಪುರ, ಚುಂಚನಹಳ್ಳಿ, ಹರದನಹಳ್ಳಿ, ದೇವರಸನಹಳ್ಳಿ ಮತ್ತು ಕೋಡಿನರಸೀಪುರ ಗ್ರಾಮಗಳಲ್ಲಿ ಬೆಳೆಯಲಾಗುತ್ತಿದೆ.<br><br>ನಂಜನಗೂಡು ರಸಬಾಳೆ ತಳಿಯನ್ನು ಹೆಚ್ಚಿನದಾಗಿ ಬೆಳೆಯಲು ಸರ್ಕಾರದಿಂದ ಉತ್ತೇಜನ ನೀಡುವ ಯೋಜನೆಗಳು ಈ ಕೆಳಕಂಡಂತಿವೆ:_<br><br>1. ಸಮಗ್ರ ತೋಟಗಾರಿಕೆ ಅಭಿವೃದ್ಧಿ ಯೋಜನೆಯಡಿ ಭೌಗೋಳಿಕ ಗುರುತು ಬೆಳೆಯಾದ ನಂಜನಗೂಡು ರಸಬಾಳೆಯ ಸಂರಕ್ಷಣೆ, ಪ್ರದೇಶ ವಿಸ್ತರಣೆ ಮತ್ತು ಉತ್ಪಾದನೆಗೆ ಉತ್ತೇಜನ ಕಾರ್ಯಕ್ರಮದಡಿ ಪ್ರದೇಶ ವಿಸ್ತರಣೆಗಾಗಿ ಹನಿ ನೀರಾವರಿ ಸಹಿತ 0.20 ಹೆಕ್ಟೇರ್ ಪ್ರದೇಶಕ್ಕೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ರೈತರಿಗೆ ಶೇ.90 ರಂತೆ ರೂ.67,312/- ಹಾಗೂ ಇತರೆ ರೈತರಿಗೆ ಶೇ.75 ರಂತೆ ರೂ.56,093/-ಗಳ ಸಹಾಯಧನ ನೀಡಲಾಗುತ್ತಿದೆ.<br><br>2. ಕೃಷಿ ವಿಜ್ಞಾನ ಕೇಂದ್ರ, ಸುತ್ತೂರು, ತೋಟಗಾರಿಕೆ ಮಹಾ ವಿದ್ಯಾಲಯ ಹಾಗೂ NRC on Banana, ತ್ರಿಚಿ ರವರ ಸಹಯೋಗದೊಂದಿಗೆ ನಂಜನಗೂಡು ರಸಬಾಳೆ ತಳಿಯ ಬೇಸಾಯದ ತಾಂತ್ರಿಕತೆ ಕುರಿತು 340 ರೈತರಿಗೆ ತರಬೇತಿಯನ್ನು ನೀಡಲಾಗಿದೆ. |

| | |
|---|---|
| | 3. ನಂಜನಗೂಡು ರಸಬಾಳೆ ತಳಿಯ ಪ್ರಾತ್ಯಕ್ಷಿಕೆ ತಾಕುಗಳನ್ನು ಹುಣಸೂರು ತಾಲ್ಲೂಕಿನ ವಾರಂಚಿ ಕ್ಷೇತ್ರ ಹಾಗೂ ಮೈಸೂರು ತಾಲ್ಲೂಕಿನ ಯಲಚನಹಳ್ಳಿ ತೋಟಗಾರಿಕೆ ಕ್ಷೇತ್ರಗಳಲ್ಲಿ ಕೈಗೊಳ್ಳಲಾಗಿದೆ.<br><br>4. ನಂಜನಗೂಡು ರಸಬಾಳೆ ತಾಕುಗಳಲ್ಲಿ ಕ್ಷೇತ್ರೋತ್ಸವವನ್ನು ಕೈಗೊಂಡು ಉತ್ತಮ ಬೇಸಾಯ ಪದ್ಧತಿಗಳನ್ನು ರೈತರಿಗೆ ಮನವರಿಕೆ ಮಾಡಿಕೊಡಲಾಗುತ್ತಿದೆ.<br><br>5. ವಿವಿಧ ಫಲ-ಪುಷ್ಪ ಪ್ರದರ್ಶನಗಳಲ್ಲಿ ನಂಜನಗೂಡು ರಸಬಾಳೆ ಪ್ರದರ್ಶನಗೊಂಡು ಬಳಕೆದಾರರಿಗೂ ಈ ಬೆಳೆ ಬಗ್ಗೆ ಆಸಕ್ತಿ ಮೂಡಿಸಿ ಮಾರುಕಟ್ಟೆ ವಿಸ್ತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: HORTI 516 HGM 2025**

**(ಎಸ್. ಎಸ್. ಮಲ್ಲಿಕಾರ್ಜುನ್)**
**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**